RNU AIR DHARWAD

FEBRUARY 22, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಹೊಸದಿಲ್ಲಿಯ ಭಾರತ ಮಂಟಪಂ ನಲ್ಲಿ ಜರುಗಿದ, –ಗ್ಲೋಬಲ್ ಎ.ಐ ಇಂಪ್ಯಾಕ್ಟ ಸಮ್ಮಿಟ್, ಕೃತಕ ಬುದ್ಧಿಮತ್ತೆ–ಎ.ಐ ಕ್ಷೇತ್ರದಲ್ಲಿ ಭಾರತದ ಅದ್ಭುತ ಸಾಮರ್ಥ್ಯವನ್ನು ಜಗತ್ತಿಗೆ ಪರಿಚಯಿಸುವ ಅವಕಾಶ ಕಲ್ಪಿಸಿದೆ. ಶೃಂಗಸಭೆಯಲ್ಲಿ ಭಾರತದ ಮೂರು ಸ್ವದೇಶಿ ನಿರ್ಮಿತ ಎ.ಐ ಮಾದರಿಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಆಕಾಶವಾಣಿಯ ಜನಪ್ರಿಯ, ಮನ್ ಕಿ ಬಾತ್ ಕಾರ್ಯಕ್ರಮದ, 131 ನೇ ಆವೃತ್ತಿಯಲ್ಲಿ ಅವರು ದೇಶ, ವಿದೇಶಗಳ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದರು. ಭಾರತ ಇಂದು ವಿಶ್ವದಲ್ಲೇ ಅತ್ಯಂತ ದೊಡ್ಡ ಭತ್ತ ಉತ್ಪಾದಕ ರಾಷ್ಟ್ರವಾಗಿದೆ ಎಂದು ಬಣ್ಣಿಸಿದ ಪ್ರಧಾನಮಂತ್ರಿ ಅವರು, ಕರ್ನಾಟಕದ ನಂಜನಗೂಡು ಬಾಳೆಹಣ್ಣು, ಮೈಸೂರು ವೀಳ್ಯದೆಲೆ, ಇಂಡಿ ನಿಂಬೇಹಣ್ಣು ರಫ್ತಿನ ಬಗ್ಗೆ ಉಲ್ಲೇಖಿಸಿದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಧ್ವನಿ 41 ಸೆಕೆಂದುಗಳು

<><><>

ಗದಗ ಜಿಲ್ಲೆ, ನಾಗಾವಿ ಗ್ರಾಮದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ "ಕಾರ್ಪೊರೇಟ್ ಮತ್ತು ಸಾಫ್ಟ್‌ವೇರ್ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆಯಿಂದ ಕೆಲಸದ ಸ್ವರೂಪದಲ್ಲಿ ಉಂಟಾಗುತ್ತಿರುವ ಬದಲಾವಣೆಗಳು" ವಿ 'ಯ ಕುರಿತು ಉಪನ್ಯಾಸ ಜರುಗಿತು. ಅಬಾಟ್ ಸಂಸ್ಥೆಯ ಹಿರಿಯ ಸಾಫ್ಟ್‌ವೇರ್ ಅಭಿಯಂತರ, ಸುರಜ್ ಮುದಾಸೆ ಅವರು, ತಂತ್ರಜ್ಞಾನ ಯುಗದಲ್ಲಿ ಕೃತಕ ಬುದ್ಧಿಮತ್ತೆ, ಕೆಲಸದ ಸ್ವರೂಪವನ್ನು ಹೇಗೆ ಪರಿವರ್ತಿಸುತ್ತಿದೆ ಎಂಬುದರ ಕುರಿತು ಉಪನ್ಯಾಸ ನೀಡಿದರು.

<><><>

ಕರ್ನಾಟಕದಲ್ಲಿ ಎಲೆಕ್ಟ್ರಿಕ್ ವಾಹನ ಉದ್ಯಮಕ್ಕೆ ವಿಪುಲ ಅವಕಾಶಗಳಿವೆ. ಅನೇಕ ಕಂಪನಿಗಳು ರಾಜ್ಯವನ್ನು ಕಾರ್ಯಕ್ಷೇತ್ರ ಮಾಡಿಕೊಂಡಿದ್ದು, ರಾಜ್ಯವು ಇ.ವಿ ಉದ್ಯಮದ ಹಬ್ ಆಗಿ ಅಭಿವೃದ್ಧಿ ಹೊಂದುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು. ಬೆಂಗಳೂರಿನಲ್ಲಿ, ಖಾಸಗಿ ಸುದ್ದಿವಾಹಿನಿ ಆಯೋಜಿಸಿದ್ದ, 'ಇವಿ ಎವರೆಡಿ –20'26' ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ನವ ಉದ್ಯಮಗಳಿಗೆ ಹೆಚ್ಚಿನ ಉತ್ತೇಜನ ನೀಡುತ್ತಿದೆ. ದೇಶದಲ್ಲಿ ಅಪರೂಪದ ಆಯಸ್ಕಾಂತಗಳ ಉತ್ಪಾದನೆ, ಬಳಕೆಯನ್ನು ಉತ್ತೇಜಿಸಲು, 7 ಸಾವಿರದ 280 ಕೋಟಿ ರೂಪಾಯಿ ವೆಚ್ಚದ ಯೋಜನೆಯನ್ನು ರೂಪಿಸಲಾಗಿದೆ ಎಂದರು.

<><><>

ಬೆಳಗಾವಿ ಜಿಲ್ಲೆ, ಮುನವಳ್ಳಿಯ ಪಂಚಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ, ಸವದತ್ತಿ ತಾಲೂಕು, ಎಂಟನೇ ಕನ್ನಡ ಸಾಹಿತ್ಯ ಸಮ್ಮೇಳನವು, ಹಿರಿಯ ಸಾಹಿತಿ ಡಾಕ್ಟರ ಬಸು ಬೇವಿನಗಿಡದ ಅವರ ಸರ್ವಾಧ್ಯಕ್ಷತೆಯಲ್ಲಿ ಜರುಗಿತು. ಮುನವಳ್ಳಿಯ ಶ್ರೀ ಮುರುಘೇಂದ್ರ ಮಹಾಸ್ವಾಮಿಗಳು, ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳವರು ದಿವ್ಯ ಸಾನಿಧ್ಯ ವಹಿಸಿದ್ದರು. ಅಶ್ವತ್ಥ ವಸಂತ ವೈದ್ಯ ಅವರು ಸಮ್ಮೇಳನ ಉದ್ಘಾಟಿಸಿದರು.

<><><>

ಮಾಹಿತಿ ಹಕ್ಕು ಕಾಯಿದೆ ಜನಪರ ಹಾಗೂ ಪ್ರಬಲ ಕಾಯಿದೆಯಾಗಿದ್ದು, ಪಾರದರ್ಶಕ ಆಡಳಿತ ವ್ಯವಸ್ಥೆಯನ್ನು ಜಾರಿಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಆಯೋಗದ, ಕಲಬುರಗಿ ಪೀಠದ, ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟ ಸಿಂಗ್ ಹೇಳಿದರು. ಕೊಪ್ಪಳ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ, ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ, ಮಾಹಿತಿ ಹಕ್ಕು ಕಾಯಿದೆ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಲಬುರಗಿ ಪೀಠ ಆರಂಭವಾದಾಗಿನಿಂದ, ಮಾಹಿತಿ ಹಕ್ಕು ಕಾಯಿದೆಗೆ ಸಂಬಂಧಿಸಿದ, 10 ಸಾವಿರದ 423 ಪ್ರಕರಣಗಳನ್ನು ಈ ತನಕ ವಿಲೇವಾರಿ ಮಾಡಲಾಗಿದೆ ಎಂದರು.

<><><>

ಕಲಬುರಗಿಯಲ್ಲಿ ಆಯೋಜಿತ ರಾಷ್ಟ್ರೀಯ ನಾಟಕೋತ್ಸವದ ಎರಡನೇ ದಿನವಾದ ಇಂದು, ನಗರದ ಎಸ್.ಎಂ ಪಂಡಿತ್ ರಂಗಮಂದಿರದಲ್ಲಿ ಸಂಜೆ 7 ಗಂಟೆಗೆ, ಅಜಿತೇಶ್ ಗುಪ್ತಾ ಹಾಗೂ ಮೋಹಿತ್ ಅಗರ್ವಾಲ್ ನಿರ್ದೇಶನದ ‘ಜೋ ಡೂಬಾ ಸೋ ಪಾರ್’ ಹಿಂದಿ ಮತ್ತು ಉರ್ದು ಭಾ ’ಯ ನಾಟಕವನ್ನು, ಮುಂಬೈನ ಅರಣ್ಯ ಥಿಯೇಟರ್ ತಂಡ ಪ್ರಸ್ತುತಪಡಿಸಲಿದೆ.

<><><>

ರಾಜ್ಯದಲ್ಲಿ ನೇಕಾರಿಕೆಯಂತಹ ಪಾರಂಪರಿಕ ಕುಲ ಕಸುಬುಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ, ಸಂತೆ ಮಾದರಿಯ ಮಾರುಕಟ್ಟೆ ನಿರ್ಮಾಣದ ಅಗತ್ಯವಿದೆ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದಲ್ಲಿ ನಡೆದ ದೊಡ್ಡಬಳ್ಳಾಪುರ ಸೀರೆ ಸಂತೆ– ಸೀರೆಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು, ಇಂದು ದೇಶದ ರಫ್ತು ಸಾಮರ್ಥ್ಯ ಹೆಚ್ಚಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸ್ವದೇಶಿ ಪರಿಕಲ್ಪನೆಗೆ ಪೂರಕವಾಗಿ ದೇಸಿ ಉದ್ಯಮಗಳನ್ನು ಉತ್ತೇಜಿಸಬೇಕಿದೆ ಎಂದು ತಿಳಿಸಿದರು.

(ಬೆಂ.ಗ್ರಾ 39)

<><><>

ಹುಬ್ಬಳ್ಳಿ–ಧಾರವಾಡ ಮಹಾನಗರ ವ್ಯಾಪ್ತಿಯ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ –ಎಸ್.ಐ.ಆರ್ ಕಾರ್ಯ ಆರಂಭಗೊಂಡಿದೆ. ಇಂದು ಬೆಳಗ್ಗೆ 10 ಗಂಟೆಯಿಂದ ಆರಂಭಗೊಂಡಿರುವ ಮ್ಯಾಪಿಂಗ್ ಕಾರ್ಯ ಸಂಜೆ 5 ಗಂಟೆಯ ವರೆಗೆ ಎಲ್ಲ ಮತಗಟ್ಟೆ ಕೇಂದ್ರಗಳಲ್ಲಿ, ನಡೆಯಲಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>